## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2021-22ನೇ ಶೈಕ್ಷಣಿಕ ಸಾಲಿನಿಂದ ಜಿ.ಎಂ ಇನ್ಸಿಟ್ಯೂಟ್ ಆಫ್ ಫಾರ್ಮಸೂಟಿಕಲ್ ಅಂಡ್ ಸೈನ್ಸಸ್ ರಿಸರ್ಚ್, ದಾವಣಗೆರೆ, ಸಂಸ್ಥೆಯ ಬಿ.ಫಾರ್ಮಸಿ ಕೋರ್ಸಿನ ಪ್ರವೇಶಮಿತಿ ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:**
1. ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಇವರ ಪತ್ರ ಸಂಖ್ಯೆ:ಎಸಿಎ/ಎಎಫ್‌ಎಫ್/ಪಿಹೆಚ್-130/2021-22, ದಿನಾಂಕ: 14.06.2021.
2. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಔನಿಇ/13/ಯೋಜನೆ/2021-22, ದಿನಾಂಕ:26.08.2021.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ (1)ರ ಪತ್ರದಲ್ಲಿ, ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು ಜಿ.ಎಂ ಇನ್ಸಿಟ್ಯೂಟ್ ಆಫ್ ಫಾರ್ಮಸೂಟಿಕಲ್ ಸೈನ್ಸಸ್ ಅಂಡ್ ರಿಸರ್ಚ್, ದಾವಣಗೆರೆ, ಸಂಸ್ಥೆಗೆ ಬಿ.ಫಾರ್ಮಸಿ ಕೋರ್ಸಿನ ಪ್ರವೇಶಮಿತಿ ಹೆಚ್ಚಿಸಲು ಅನುಮತಿ ನೀಡುವ ಸಂಬಂಧ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ ಹಾಗೂ ಸಿಂಡಿಕೇಟ್ ಸಭೆಗಳಲ್ಲಿ ಅನುಮೋದಿಸಿದ್ದು, ಸದರಿ ಮಹಾವಿದ್ಯಾಲಯದ ಬಿ.ಫಾರ್ಮಸಿ ಕೋರ್ಸಿನ ಪ್ರವೇಶಮಿತಿಯನ್ನು 60 ರಿಂದ 100ಕ್ಕೆ ಹೆಚ್ಚಿಸಬಹುದಾಗಿರುತ್ತದೆಂದು ಅಭಿಪ್ರಾಯ ನೀಡಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ (2)ರ ಪತ್ರದಲ್ಲಿ, ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರು ಜಿ.ಎಂ ಇನ್ಸಿಟ್ಯೂಟ್ ಆಫ್ ಫಾರ್ಮಸೂಟಿಕಲ್ ಸೈನ್ಸಸ್ ಅಂಡ್ ರಿಸರ್ಚ್, ದಾವಣಗೆರೆ ಸಂಸ್ಥೆಗೆ ಬಿ.ಫಾರ್ಮಸಿ ಕೋರ್ಸಿನ ಪ್ರವೇಶ ಮಿತಿಯನ್ನು ಹೆಚ್ಚಿಸಲು ಅನುಮತಿ ನೀಡುವುದಕ್ಕೆ ಸಂಬಂಧಿಸಿದಂತೆ ಪ್ರಾಂಶುಪಾಲರು, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಬೆಂಗಳೂರು ಇವರು ಸಲ್ಲಿಸಿರುವ ಪರಿವೀಕ್ಷಣಾ ವರದಿಯನುಸಾರ, ಸದರಿ ಸಂಸ್ಥೆಯು ನಿಯಮಾನುಸಾರ ಅಗತ್ಯ ಮೂಲಭೂತ ಸೌಕರ್ಯಗಳನ್ನು ಹೊಂದಿರುವುದರಿಂದ, ಭಾರತೀಯ ಫಾರ್ಮಸಿ ಪರಿಷತ್ತಿನ ಅನುಮೋದನೆ ಪಡೆಯುವ ಷರತ್ತಿನೊಂದಿಗೆ ಸದರಿ ಸಂಸ್ಥೆಗೆ ಬಿ.ಫಾರ್ಮಸಿ ಕೋರ್ಸಿನ ಪ್ರವೇಶ ಮಿತಿಯನ್ನು 60 ರಿಂದ 100ಕ್ಕೆ ಹೆಚ್ಚಿಸಲು ಅನುಮತಿ ನೀಡಬಹುದಾಗಿದೆ ಎಂದು ಅಭಿಪ್ರಾಯಿಸಿರುತ್ತಾರೆ.

ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಮತ್ತು ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ ಇವರ ಪತ್ರಗಳು ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ಜಿ.ಎಂ ಇನ್ಸಿಟ್ಯೂಟ್ ಆಫ್ ಫಾರ್ಮಸೂಟಿಕಲ್ ಸೈನ್ಸಸ್ ಅಂಡ್ ರಿಸರ್ಚ್, ದಾವಣಗೆರೆ ಸಂಸ್ಥೆಗೆ ಬಿ.ಫಾರ್ಮಸಿ ಕೋರ್ಸಿನ ಪ್ರವೇಶ ಮಿತಿಯನ್ನು 2021-2022ನೇ ಶೈಕ್ಷಣಿಕ ಸಾಲಿಗೆ 60 ರಿಂದ 100ಕ್ಕೆ ಹೆಚ್ಚಿಸಲು ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ ಹಾಗೂ ಅಗತ್ಯವಿರುವ ಇತರೆ ಸಕ್ಷಮ ಪ್ರಾಧಿಕಾರಗಳಿಂದ ಅನುಮೋದನೆಯನ್ನು ಪಡೆಯುವ

SRG

ಷರತ್ತಿಗೊಳಪಟ್ಟು ಅನುಮತಿ ನೀಡಲು ನಿರ್ಧರಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 43 ಪಿಟಿಡಿ 2021, ಬೆಂಗಳೂರು, ದಿನಾಂಕ: 02.12.2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಜಿ.ಎಂ ಇನ್ಸಿಟ್ಯೂಟ್ ಆಫ್ ಫಾರ್ಮಸೂಟಿಕಲ್ ಸೈನ್ಸಸ್ ಅಂಡ್ ರಿಸರ್ಚ್, ಪಿ.ಬಿ ರೋಡ್, ಜಿಎಂಐಟಿ ಕ್ಯಾಂಪಸ್, ದಾವಣಗೆರೆ ಸಂಸ್ಥೆಗೆ 2021–22ನೇ ಶೈಕ್ಷಣಿಕ ಸಾಲಿನಿಂದ ಬಿ.ಫಾರ್ಮಸಿ ಕೋರ್ಸಿನ ಪ್ರವೇಶ ಮಿತಿಯನ್ನು 60 ರಿಂದ 100ಕ್ಕೆ ಹೆಚ್ಚಿಸಲು ಈ ಕೆಳಕಂಡ ಷರತ್ತಿಗೆಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಿ ಆದೇಶಿಸಿದೆ.

1. ಪ್ರಸ್ತಾಪಿಸಿರುವ ಬಿ.ಫಾರ್ಮಸಿ ಕಾಲೇಜು/ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸುವ ಮೊದಲು ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ, ನವದೆಹಲಿ ಮತ್ತು ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ ಇವರಿಂದ ಹಾಗೂ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುಮೋದನೆ/ ಅನುಮತಿಯನ್ನು ಪಡೆಯತಕ್ಕದ್ದು.
2. ಕಾಲೇಜನ್ನು ಪ್ರಾರಂಭಿಸುವ ಮುನ್ನ ಅಗತ್ಯವಿರುವ ಎಲ್ಲಾ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
3. ಆರ್.ಜಿ.ಯು.ಹೆಚ್.ಎಸ್ ಶಿಫಾರಸ್ಸಿನಂತೆ ಬೋಧಕ ಸಿಬ್ಬಂದಿಯ ವೇತನವನ್ನು ಎ.ಐ.ಸಿ.ಟಿ.ಇಯ ವೇತನಕ್ಕೆ ಅನುಗುಣವಾಗಿ ನಿಗದಿಪಡಿಸತಕ್ಕದ್ದು.
4. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು.
5. ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು/ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
6. ರಾಜ್ಯ/ಕೇಂದ್ರ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.
7. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
8. ಸರ್ಕಾರ/ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ಯಾವುದೇ ಕಾರಣಕ್ಕೂ ಕಾಲೇಜಿನ ಹೆಸರು ಮತ್ತು ವಿಳಾಸವನ್ನು ಬದಲಾಯಿಸುವಂತಿಲ್ಲ.
9. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದ್ದಲ್ಲಿ ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

SR Gorwar 02/12/2021

**(ಶೈಲಾ ಆರ್.ಗೊರವರ)**
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾವೈಪ ಮತ್ತು ಸಮನ್ವಯ)

ಇವರಿಗೆ:

1. The Registrar-cum-Secretary, Pharmacy Council of India, P.B. No.7020, Combined Councils Building, Kotla Road, Aiwan-E-Ghalib Marg, New Delhi-110 002.
2. The Member Secretary, All India Council for Technical Education, Nelson Mandela Marg, Vasanth Kunj, New Delhi – 110 067

. . . 3

3. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
4. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಟಿ.ಬ್ಲಾಕ್, ಜಯನಗರ, ಬೆಂಗಳೂರು–41.
5. ಪ್ರಾಂಶುಪಾಲರು, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಪಿ.ಕಾಳಿಂಗರಾವ್ ರಸ್ತೆ, ಬೆಂಗಳೂರು–560 027.
6. ಪ್ರಾಂಶುಪಾಲರು, ಜಿ.ಎಂ ಇನ್ಸಿಟ್ಯೂಟ್ ಆಫ್ ಫಾರ್ಮಸೂಟಿಕಲ್ ಸೈನ್ಸ್ ಅಂಡ್ ರಿಸರ್ಚ್,ಪಿ.ಬಿ ರೋಡ್,ಜಿಎಂಐಟಿ ಕ್ಯಾಂಪಸ್, ದಾವಣಗೆರೆ

<u>ಪ್ರತಿಗಳು:–</u>

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
3. ಸರ್ಕಾರದ ಉಪ ಕಾರ್ಯದರ್ಶಿ–3ರವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
4. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.